**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಡಿಟಿಇ/59/ಇಎಸ್‌ಟಿ(1)ಎ/2013(ಭಾಗ)

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು-560 001.
ದಿನಾಂಕ: 19-06-2020

**ಹಿಂಬರಹ**

ಸರ್ಕಾರದ ಆದೇಶ ಸಂಖ್ಯೆ: ಇಡಿ 49 ಡಿಟಿಇ 2020, ದಿನಾಂಕ: 16-06-2020 ನ್ನು ಸಂಬಂಧಪಟ್ಟವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

**"ಕರಡು ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ"**

**ಆಡಳಿತಾಧಿಕಾರಿ,**
**ತಾಂತ್ರಿಕ ಶಿಕ್ಷಣ ಇಲಾಖೆ,**
**ಬೆಂಗಳೂರು**

ಇವರಿಗೆ-

1. ಪ್ರಧಾನ ಮಹಾಲೇಖಪಾಲರು (ಎ&ಯು) (ಎ&ಇ) 1&2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು
3. ಮಾನ್ಯ ಉಪ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳು(ಉನ್ನತ ಶಿಕ್ಷಣ), ವಿಕಾಸಸೌಧ, ಬೆಂಗಳೂರು
4. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು
5. ಅಪರ ನಿರ್ದೇಶಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
6. ಜಂಟಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
7. ಆಡಳಿತಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
8. ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಎಲ್ಲಾ ಪ್ರಾಂಶುಪಾಲರುಗಳಿಗೆ
9. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
10. ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
11. ನಿರ್ದೇಶಕರ ಆಪ್ತ ಶಾಖೆ
12. ಕಛೇರಿ ಪ್ರತಿ.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಹುದ್ದೆಯನ್ನು "ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ" ಎಂದು ಮರು ಪದನಾಮೀಕರಿಸುವ ಬಗ್ಗೆ.

**ಓದಲಾಗಿದೆ:-**

JD (Admn)/ADO (Re(Admn)

ಸರ್ಕಾರದ ಆದೇಶ ಸಂಖ್ಯೆ: ಇಡಿ 336 ಡಿಸಿಇ 96, ಬೆಂಗಳೂರು, ದಿನಾಂಕ: 24.02.1997.

**ಪ್ರಸ್ತಾವನೆ:-**

16/6/14 5.45PM

ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿನ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಅನೇಕ ಪತ್ರಾಂಕಿತ ಹಾಗೂ ಪತ್ರಾಂಕಿತರಲ್ಲದ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದು, ಸರ್ಕಾರಿ/ಖಾಸಗಿ/ಅನುದಾನಿತ/ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಹಾಗೂ ಪಾಲಿಟೆಕ್ನಿಕ್‌ಗಳ ಆಡಳಿತ ಹಾಗೂ ಶೈಕ್ಷಣಿಕ ವಿಷಯಗಳನ್ನು ನಿರ್ವಹಿಸಲಾಗುತ್ತಿದೆ. ಇದರಡಿಯಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಪಾಲಿಟೆಕ್ನಿಕ್‌ಗಳು ಮತ್ತು ವಿದ್ಯಾರ್ಥಿ ನಿಲಯಗಳಿಗೆ ಸಂಬಂಧಿಸಿದಂತೆ ಭೂಸ್ವಾಧೀನ ಹಾಗೂ ಕಟ್ಟಡ ನಿರ್ಮಾಣ ಕಾರ್ಯವನ್ನು ಕೈಗೊಳ್ಳುವುದು, ಸದರಿ ಶಿಕ್ಷಣ ಸಂಸ್ಥೆಗಳಿಗೆ ಪೀಠೋಪಕರಣ ಮತ್ತು ಪ್ರಯೋಗಾಲಯ ಉಪಕರಣಗಳನ್ನು ಸರಬರಾಜು ಮಾಡುವುದು, ಕೇಂದ್ರ ಪುರಸ್ಕೃತ ಯೋಜನೆಗಳನ್ನು ಅನುಷ್ಠಾನಗೊಳಿಸುವುದು, ಇತ್ಯಾದಿ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುತ್ತಿದ್ದು, ಇಲಾಖೆಯು ಗುರುತರವಾದ ಜವಾಬ್ದಾರಿಯನ್ನು ಹೊಂದಿರುವುದಿಲ್ಲದೇ ಇಲಾಖೆಗೆ ಒದಗಿಸಲಾಗುವ ಅನುದಾನವನ್ನು ಸಮರ್ಥವಾಗಿ ನಿರ್ವಹಿಸಬೇಕಾಗಿರುತ್ತದೆ.

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಆಡಳಿತವನ್ನು ಬಲಪಡಿಸುವ ಉದ್ದೇಶದಿಂದ ಕಾಲೇಜು ಶಿಕ್ಷಣ ಆಯುಕ್ತರ ಹುದ್ದೆಯನ್ನು ಸೃಜಿಸಿ, ಕಾಲೇಜು ಶಿಕ್ಷಣ ನಿರ್ದೇಶನಾಲಯವನ್ನು ಆಯುಕ್ತಾಲಯವಾಗಿ ಮಾರ್ಪಡಿಸಲಾಗಿದೆ. ಕಾಲೇಜು ಶಿಕ್ಷಣ ಇಲಾಖೆಯು ಭಾರತೀಯ ಆಡಳಿತ ಸೇವೆಯ ಅಧಿಕಾರಿಗಳ ನೇತೃತ್ವದಲ್ಲಿ ಸಮರ್ಥವಾಗಿ ಕಾರ್ಯನಿರ್ವಹಿಸುತ್ತಿದೆ. ತಾಂತ್ರಿಕ ಶಿಕ್ಷಣ ನಿರ್ದೇಶನಾಲಯವನ್ನು ಸಹ ಬಲಪಡಿಸುವ ಸಲುವಾಗಿ ಆಡಳಿತಾತ್ಮಕ ಹಿತದೃಷ್ಟಿಯಿಂದ

ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಅಧೀನದಲ್ಲಿ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯವನ್ನು ತರಲು ಮತ್ತು "ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ" ಎಂಬ ಹುದ್ದೆಯನ್ನು "ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ" ಎಂದು ಪದನಾಮೀಕರಿಸಲು ಸರ್ಕಾರವು ನಿರ್ಧರಿಸಿದ ಹಿನ್ನೆಲೆಯಲ್ಲಿ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 49 ಡಿಟಿಇ 2020.**
**ಬೆಂಗಳೂರು, ದಿನಾಂಕ: 16ನೇ ಜೂನ್ 2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, "ಆಯುಕ್ತರು, ಕಾಲೇಜು ಶಿಕ್ಷಣ" ಹುದ್ದೆಯನ್ನು "ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ" ಎಂದು ತಕ್ಷಣದಿಂದ ಜಾರಿಗೆ ಬರುವಂತೆ ಪದನಾಮೀಕರಿಸಿ ಆದೇಶಿಸಿದೆ.

ಇನ್ನು ಮುಂದೆ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಎಲ್ಲಾ ವಿಷಯಗಳ ವ್ಯಾಪ್ತಿಗೆ ಸಂಬಂಧಿಸಿದಂತೆ, ಇಲಾಖಾ ಮುಖ್ಯಸ್ಥರು "ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ" ಇವರು ಆಗಿರುತ್ತಾರೆ. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರಿಗೆ ತಾಂತ್ರಿಕ ಶಿಕ್ಷಣ ಇಲಾಖೆಯ ಸಂಪೂರ್ಣ ಕಾರ್ಯಭಾರವನ್ನು ವಹಿಸಿಕೊಡಲಾಗಿದೆ.

ಕಾಲೇಜು ಶಿಕ್ಷಣ ಇಲಾಖೆ ಮತ್ತು ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಬೇರೆ ಬೇರೆ ವೃಂದ ಮತ್ತು ನೇಮಕಾತಿ ನಿಯಮಾವಳಿ, ಸಿಬ್ಬಂದಿಗಳ ಜೇಷ್ಠತೆ ಮತ್ತು ಬೋಧಕ ಸಿಬ್ಬಂದಿಗಳ ವರ್ಗಾವಣೆ ನಿಯಂತ್ರಣ ಅಧಿನಿಯಮಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಸಂಬಂಧಪಟ್ಟ ವೃಂದ ಮತ್ತು ನೇಮಕಾತಿ ನಿಯಮಾವಳಿಗಳು ಮತ್ತು ಇತರೆ ನಿಯಮಾವಳಿಗಳಲ್ಲಿ "ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ" ಎಂಬ ಪದನಾಮೀಕರಣವನ್ನು ಮತ್ತು ಇನ್ನಿತರೆ ಸೂಕ್ತ ತಿದ್ದುಪಡಿಗಳನ್ನು ಅಳವಡಿಸಿಕೊಳ್ಳಲಾಗುವುದು.

...3

ಸದರಿ ಆದೇಶವನ್ನು ಕ್ರಮವಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಇ-ಸಿಆಸುಇ 232 ಎಸ್‌ಎಎಸ್ 2020, ದಿನಾಂಕ: 02.06.2020 ಮತ್ತು ಆಇ 204 ವೆಚ್ಚ-8/2020 ದಿನಾಂಕ: 08.06.2020ರ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/06/2020
(ಎಂ.ಜಿ. ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಅದರ 100 ಪ್ರತಿಗಳನ್ನು ಒದಗಿಸಲು ಕೋರಿದೆ.

ಪ್ರತಿ:

1. ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ), ಭಾರತ ಸರ್ಕಾರ, ನವದೆಹಲಿ.
2. ಅಧ್ಯಕ್ಷರು / ಸದಸ್ಯ ಕಾರ್ಯದರ್ಶಿ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್, 7ನೇ ಮಹಡಿ, ಚಂದ್ರಲೋಕ್ ಬಿಲ್ಡಿಂಗ್, ಜನಪಥ್, ನವದೆಹಲಿ- 110001.
3. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಆಡಿಟ್)(ಎ&ಇ)(ಅಕೌಂಟ್ಸ್), ಬೆಂಗಳೂರು.
4. ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು. (ಕೇಂದ್ರ ಸರ್ಕಾರದ ಡಿ.ಓ.ಪಿ.ಟಿ ಇಲಾಖೆಯ ಒಪ್ಪಿಗೆಯನ್ನು ಪಡೆಯುವ ಬಗ್ಗೆ ಕ್ರಮವಹಿಸತಕ್ಕದ್ದು)

....4

8. ಮಾನ್ಯ ಉಪ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳು (ಉನ್ನತ ಶಿಕ್ಷಣ, ಐ.ಟಿ&ಬಿ.ಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ), ವಿಕಾಸಸೌಧ, ಬೆಂಗಳೂರು.
9. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
10. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
11. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಮಲ್ಲೇಶ್ವರಂ, ಬೆಂಗಳೂರು.
12. ಕಾರ್ಯನಿರ್ವಾಹಕ ನಿರ್ದೇಶಕರು, ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
13. ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳು / ಕುಲಸಚಿವರು
14. ಎಲ್ಲಾ ಜಿಲ್ಲಾಧಿಕಾರಿಗಳು
15. ಉಪ ಮಹಾನಿರ್ದೇಶಕರು, ಎನ್.ಸಿ.ಸಿ ನಿರ್ದೇಶನಾಲಯ, ಕನ್ನಿಂಗ್ ಹ್ಯಾಮ್ ರಸ್ತೆ, ಬೆಂಗಳೂರು.
16. ಪ್ರಾಂಶುಪಾಲರು, ಸರ್ಕಾರಿ ಮತ್ತು ಅನುದಾನಿತ ಶಿಕ್ಷಣ ಸಂಸ್ಥೆಗಳು ಇವರಿಗೆ (ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಮುಖಾಂತರ).
17. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸೇವೆಗಳು–2), ವಿಧಾನಸೌಧ, ಬೆಂಗಳೂರು.
18. ಸರ್ಕಾರದ ಉಪಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸಚಿವ ಸಂಪುಟ) ವಿಧಾನಸೌಧ, ಬೆಂಗಳೂರು.
19. ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ).
20. ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು & ಸಮನ್ವಯ).
21. ಸಮನ್ವಯಾಧಿಕಾರಿ, ಮಾಹಿತಿ ಕೇಂದ್ರ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
22. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು.